# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: Reg. Koliwad Statement

ಪತ್ರಿಕೆಯ ಹೆಸರು : NAME OF THE NEWS PAPER : Vijaya karnataka ದಿನಾಂಕ : DATE : 28.11.2019

### ಸಿದ್ದರಾಮಯ್ಯ ವಿರುದ್ಧ ಕೋಳಿವಾಡ ವಿಡಿಯೊ ವೈರಲ್

**ಬೆಂಗಳೂರು:** ಕಳೆದ ವಿಧಾನಸಭೆ ಚುನಾವಣೆ ಸೋಲಿನ ಬಳಿಕ ಸಿದ್ದರಾಮಯ್ಯ ವಿರುದ್ಧ ಮಾಜಿ ಸ್ಪೀಕರ್ ಕೆ.ಬಿ.ಕೋಳಿವಾಡ ನೀಡಿದ್ದ ಹೇಳಿಕೆಯ ವಿಡಿಯೊವನ್ನು ಬಿಜೆಪಿ ಟ್ವಿಟರ್‌ನಲ್ಲಿ ಹಂಚಿಕೊಂಡಿದೆ. ಸಿದ್ದರಾಮಯ್ಯ ವಿರುದ್ಧ ಬಹಿರಂಗವಾಗಿಯೇ



ವಾಗ್ದಾಳಿ ನಡೆಸಿದ್ದ ಕೋಳಿವಾಡ, 2018ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಹಿನ್ನಡೆಗೆ ಸಿದ್ದರಾಮಯ್ಯ ನಡವಳಿಕೆಯೇ ಕಾರಣ. ಕಾಂಗ್ರೆಸ್ ಹಿತದೃಷ್ಟಿಯಿಂದ ಅವರನ್ನು ದೂರವಿಡುವುದೇ ಒಳ್ಳೆಯದು. 2013ರಲ್ಲಿ ಪರಮೇಶ್ವರ ಸೋಲಿಗೂ ಸಿದ್ದರಾಮಯ್ಯ ಕಾರಣ. ತಮಗೂ ಟಿಕೆಟ್ ತಪ್ಪಿಸಲು ಯತ್ನಿಸಿದ್ದರು ಎಂದು ಆರೋಪಿಸಿದ್ದರು. ಇದನ್ನು ರಾಜ್ಯ ಬಿಜೆಪಿಯ ಅಧಿಕೃತ ಟ್ವಿಟರ್‌ನಲ್ಲಿ ಹಂಚಿಕೊಳ್ಳಲಾಗಿದೆ. ಸಿದ್ದರಾಮಯ್ಯ ಅವರು ಕೋಳಿವಾಡ ಪರವಾಗಿ ಕ್ಷೇತ್ರದಲ್ಲಿ ಮಂಗಳವಾರ ಪ್ರಚಾರ ನಡೆಸಿದ್ದರು. ಈ ಸಂದರ್ಭದಲ್ಲಿ ಕೋಳಿವಾಡರ ಹಳೆಯ ವಿಡಿಯೊ ಸೋಷಿಯಲ್ ಮೀಡಿಯಾದಲ್ಲಿ ಹರಿದಾಡಿತ್ತು.

5